ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/10/ಸಿಸಿಟೆಕ್/2017-18/2129

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ:29-10-2018

**-: ಸುತ್ತೋಲೆ :-**

ವಿಷಯ: ಕನ್ನಡ ಭಾಷೆಯನ್ನು ರಾಜ್ಯದ ಆಡಳಿತದ ಎಲ್ಲಾ ಮಟ್ಟದಲ್ಲಿ ಕಡ್ಡಾಯವಾಗಿ ಅನುಷ್ಠಾನಮಾಡುವ ಬಗ್ಗೆ.

ಉಲ್ಲೇಖ: ಅಧ್ಯಕ್ಷರ ಆಪ್ತ ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಕಅಪ್ರಾ/ಆಕಾ/561/2018, ದಿನಾಂಕ:11.10.2018

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಿತ ಪತ್ರಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು/ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿವರ್ಗದವರು ಈ ಕೆಳಕಂಡ ವಿಷಯಗಳ ಕುರಿತು ಕಡ್ಡಾಯವಾಗಿ ಗಮನಹರಿಸಿ ಕ್ರಮಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

1. ರಾಜ್ಯ ಸರ್ಕಾರದೊಳಗೆ ಪತ್ರ ವ್ಯವಹಾರ ನಡೆಸುವಾಗ ಎಲ್ಲಾ ರೀತಿಯ ಪತ್ರಗಳನ್ನು, ಟಿಪ್ಪಣಿಗಳನ್ನು ಆಂಗ್ಲ ಭಾಷೆಯಲ್ಲಿ ವ್ಯವಹರಿಸದೆ, ಕಡ್ಡಾಯವಾಗಿ ಕನ್ನಡದಲ್ಲೇ ವ್ಯವಹರಿಸಬೇಕೆಂದು ಹಾಗೂ ಕನ್ನಡ ದಿನಪತ್ರಿಕೆಗಳಲ್ಲಿ ಜಾಹಿರಾತುಗಳನ್ನು ನೀಡುವಾಗ ಕಡ್ಡಾಯವಾಗಿ ಕನ್ನಡದಲ್ಲೇ ನೀಡುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ.
2. ಸಂಸ್ಥೆಯ ಸಿಸಿಟೆಕ್ ಉಪಘಟಕದ ವತಿಯಿಂದ ಅಲ್ಪಾವಧಿ ತರಬೇತಿ ನಡೆಸುವ ಸಲುವಾಗಿ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವಾಗ ಅರ್ಜಿ ನಮೂನೆ, ದಿನಾಂಕವನ್ನೊಳಗೊಂಡ ವೇಳಾಪಟ್ಟಿ, ಕೋರ್ಸಿನ ವಿಷಯ ಪರಿವಿಡಿ, ಸಂಪನ್ಮೂಲ ವ್ಯಕ್ತಿಗಳ ವೈಯಕ್ತಿಕ ಮಾಹಿತಿ (ರೆಸ್ಯೂಂ), ಸರ್ಕಾರದ ಇತರೆ ಯೋಜನೆಗಳಿಂದ ತರಬೇತಿಗೆ ನಿಯುಕ್ತಿಗೊಂಡ ಅಭ್ಯರ್ಥಿಗಳ ಆದೇಶ ಪ್ರತಿ ಇತ್ಯಾದಿ ವಿವರಗಳ ಮಾಹಿತಿಯನ್ನು ಕಡ್ಡಾಯವಾಗಿ ಕನ್ನಡದಲ್ಲೇ ನೀಡುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ.
3. ಸಿಸಿಟೆಕ್ ಹಾಗೂ ಸಿಡಿಟಿಪಿ ಅಲ್ಪಾವಧಿ ತರಬೇತಿಗಳಿಗೆ ಭಾಗವಹಿಸಿದ ಅಭ್ಯರ್ಥಿಗಳಿಗೆ ನೀಡುವ ತರಬೇತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಕನ್ನಡದಲ್ಲೇ ನೀಡುವಂತೆ ಕ್ರಮ ವಹಿಸಲು ಹಾಗೂ ಸದರಿ ಮಾದರಿ ಪ್ರಮಾಣ ಪತ್ರಕ್ಕೆ ನಿರ್ದೇಶನಾಲಯದ ಅನುಮತಿಯನ್ನು ಕಡ್ಡಾಯವಾಗಿ ಪಡೆಯಲು ಸಹ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:-

1. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗ, ತಾಂ.ಶಿ.ನಿ, ಬೆಂಗಳೂರು, ಡಿ.ಟಿ.ಇ. ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
3. ನಿರ್ದೇಶಕರ ಆಪ್ತ ಶಾಖೆಗೆ.